<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 640/2016 ಸಿಡಬ್ಲೂ : 10 ಪಿಡಬ್ಲೂಃ 3

ಪ್ರಮಾಣವಚನ ಬೋಧಿಸಲಾಯಿತು ದಿಃ13-03-2026

ಹೆಸರು : ಬಾಪುಗೌಡ

ತಂದೆ ಹೆಸರು : ಸಿದ್ದನಗೌಡ ಪಾಟೀಲ್

ವಯಸ್ಸು : 41 ವರ್ಷ

ಉದ್ಯೋಗ : ಪಿ ಐ ಲೋಕಾಯುಕ್ತ ಆದೇಶದಲ್ಲಿರುವವರು

ವಾಸಸ್ಥಳ : ಬೀದರ್

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು 01-10-2014 ರಿಂದ 08-06-2016 ವರೆಗೂ ಸೇಡಂ ಪಿ ಎಸ್ ನಲ್ಲಿ ಪಿ ಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ03-04-2015 ರಂದು ಚಾ ಸಾ 9 ರವರಿಂದ ಸದರಿ ಪ್ರಕರಣದ ಕಡತವನ್ನು ಪಡೆದುಕೊಂಡು, ದಿ.03-04-2015 ರಂದು ಆರೋಪಿತರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ನಿರೀಕ್ಷಣ ಜಾಮೀನನ್ನು ಪಡೆದುಕೊಂಡು ಬಂದಿರುವುದರಿಂದ ಅವರಿಗೆ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ನಂತರ ದಿ.03-05-2015 ರಂದು ಚಾ ಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಚಾ ಸಾ 8 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಗಾಯದ ಪ್ರಮಾಣ ಪತ್ರವನ್ನು ಈಗ ನೋಡಿ ಗುರುತಿಸಿದ್ದು ಅದನ್ನು ನಿ ಪಿ 3ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 3(ಎ) ಎಂದು ಗುರುತಿಸಲಾಯಿತು. ನಂತರ ಅದೇ ದಿನ ಆರೋಪಿತ ವಿರುದ್ದ ಆರೋಪಿ ಸಾಬೀತು ಆಗಿರುವುದರಿಂದ ಅದೇ ದಿನ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ಶ್ರಿ ಎನ್ ಎಂ ವಕೀಲರಿಂದ:

ದಿಃ03-04-2015 ರಂದು ಚಾ ಸಾ 9 ರವರಿಂದ ಸದರಿ ಪ್ರಕರಣದ ಕಡತವನ್ನು ಪಡೆದುಕೊಂಡು, ದಿ.03-04-2015 ರಂದು ಆರೋಪಿತರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ನಿರೀಕ್ಷಣ ಜಾಮೀನನ್ನು ಪಡೆದುಕೊಂಡು ಬಂದಿರುವುದರಿಂದ ಅವರಿಗೆ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ದಿ.03-05-2015 ರಂದು ಚಾ ಸಾ 1 ರವರ

ಗಾಯದ ಪ್ರಮಾಣ ಪತ್ರವನ್ನು ಚಾ ಸಾ 8 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಆರೋಪಿತರ ವಿರುದ್ದ ಯಾವುದೇ ಅಪರಾಧ ಸಾಬೀತು ಆಗದೇ ಇದ್ದರು ಸಹ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಿಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**